ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ    ದಿನಾಂಕ : DATE : 13/12/19

# ತಳವಾರ, ಪರಿವಾರ, ಸಿದ್ದಿಗೆ ಎಸ್ಟಿ ಸ್ಥಾನಮಾನ

■ ವಿಜಯವಾಣಿ ಸುದ್ದಿಜಾಲ ನವದೆಹಲಿ 13/12/19

ರಾಜ್ಯದ ತಳವಾರ, ಪರಿವಾರ ಮತ್ತು ಸಿದ್ದಿ ಜನಾಂಗವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವ ಕುರಿತ ಸಂವಿಧಾನ ತಿದ್ದುಪಡಿ ವಿಧೇಯಕಕ್ಕೆ ರಾಜ್ಯಸಭೆ ಅನುಮೋದನೆ ನೀಡಿದೆ.

ಈ ಮೂಲಕ ಪರಿಶಿಷ್ಟ ಪಂಗಡದ ಸ್ಥಾನಮಾನ ಸಿಗಬೇಕೆಂದು ಈ ಜನಾಂಗಗಳ ಜನರು, ರಾಜಕೀಯ ಮುಖಂಡರ ಅವಿರತ ಹೋರಾಟಕ್ಕೆ ಕೊನೆಗೂ ಸಂವಿಧಾನಾತ್ಮಕ ಜಯ ಸಿಕ್ಕಂತಾಗಿದೆ.

ಈ ಮೂರು ಜನಾಂಗಗಳನ್ನು ಪರಿಶಿಷ್ಟ ಪಂಗಡಕ್ಕೆ ಸೇರ್ಪಡೆಗೊಳಿಸುವ ಕುರಿತು ಕಳೆದ ಜನವರಿಯಲ್ಲಿ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿತ್ತು. ತದನಂತರ ತಿದ್ದುಪಡಿ ವಿಧೇಯಕವನ್ನು ಸಂಸತ್ತಿನಲ್ಲಿ ಮಂಡಿಸಲಾಗಿತ್ತು. ಆದರೆ ಆ ಸಂದರ್ಭದಲ್ಲಿ ಯಾವುದೇ ವಿಧೇಯಕಗಳು ಅನುಮೋದನೆಗೊಂಡಿರಲಿಲ್ಲ. ನಂತರದಲ್ಲಿ ಲೋಕಸಭಾ ಚುನಾವಣೆ ಕೂಡ ನಡೆದಿತ್ತು. ಹೀಗಾಗಿ, ಗುರುವಾರದಂದು ರಾಜ್ಯಸಭೆಯಲ್ಲಿ ತಿದ್ದುಪಡಿ ವಿಧೇಯಕವನ್ನು ಕೇಂದ್ರ ಬುಡಕಟ್ಟು ವ್ಯವಹಾರಗಳ ಸಚಿವರು ಮಂಡಿಸಿದರು.

ರಾಜ್ಯಸಭೆ ಸದಸ್ಯರು ವಿಧೇಯಕವನ್ನು ಸರ್ವಾನುಮತದಿಂದ ಅನುಮೋದಿಸಿದ್ದು, ಮುಂದಿನ ಅಧಿವೇಶದ ವೇಳೆ ಲೋಕಸಭೆಯಲ್ಲಿ ಮಂಡನೆಯಾಗಿ, ಅಲ್ಲಿ ಅನುಮೋದನೆ ಸಿಕ್ಕ ಬಳಿಕ ರಾಷ್ಟ್ರಪತಿ ತಮ್ಮ ಒಪ್ಪಿಗೆ ಸೂಚಿಸಲಿದ್ದಾರೆ. ಬಳಿಕ ಇದು ಕಾನೂನಾಗಿ ಪರಿವರ್ತನೆಗೊಳ್ಳಲಿದೆ.

ರಾಜ್ಯಸಭೆಯಲ್ಲಿ ತಿದ್ದುಪಡಿ ವಿಧೇಯಕದ ಬಗ್ಗೆ ಮಾತನಾಡಿದ ಬಿಜೆಪಿ ಸದಸ್ಯ ಕೆ.ಸಿ. ರಾಮಮೂರ್ತಿ, ಈ 3 ಜನಾಂಗಕ್ಕೆ ಎಸ್ಟಿ ಸ್ಥಾನಮಾನ ನೀಡುವ ಮೂಲಕ ಯುವಕರಿಗೆ ಶಿಕ್ಷಣ, ಉದ್ಯೋಗದಲ್ಲಿ ಹೆಚ್ಚಿನ ಅವಕಾಶ ಲಭಿಸಲಿವೆ. ರಾಜ್ಯದ ಅನೇಕ ರಾಜಕೀಯ ಮುಖಂಡರು ಇದಕ್ಕಾಗಿ ಹೋರಾಟ ಮಾಡಿದ್ದಾರೆ. ಕೇಂದ್ರ ಸೇರಿ ಅವರೆಲ್ಲರೂ ಅಭಿನಂದನೆಗೆ ಅರ್ಹರು ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ರಾಜ್ಯದಲ್ಲಿ 15-18 ಲಕ್ಷ ಪರಿವಾರ-ತಳವಾರ ಜನಾಂಗದ ಜನರಿದ್ದು, ಮೈಸೂರು ಸುತ್ತಮುತ್ತ ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಬೆಳಗಾವಿ, ಧಾರವಾಡ, ಉತ್ತರ ಕನ್ನಡದ ಕೆಲ ಭಾಗಗಳಲ್ಲಿ ಸಿದ್ದಿ ಸಮಾಜದವರಿದ್ದಾರೆ.

## ಕನ್ನಡದಲ್ಲಿ ಕೋರೆ ಮಾತು



ಮಸೂದೆ ಮೇಲಿನ ಚರ್ಚೆ ವೇಳೆ ಸದಸ್ಯ ಡಾ.ಪ್ರಭಾಕರ ಕೋರೆ ಕನ್ನಡ ದಲ್ಲಿ ಮಾತನಾಡಿದರು. ತಳವಾರ, ಸಿದ್ಧಿ ಜನಾಂಗದ ಜತೆಗೆ ಇನ್ನೂ ನಾಲ್ಕೈದು (ಹಳಬರು, ಗೊಲ್ಲರು, ಸುಡಗಾಡ ಸಿದ್ಧರು) ಕೆಳಸಮುದಾಯದ ಜನತೆಗೆ ನ್ಯಾಯ ಒದಗಿಸುವ ಕೆಲಸವನ್ನು ಬಿಜೆಪಿ ಸರ್ಕಾರ ಮಾಡಬೇಕಾದ ಆಗತ್ಯವಿದೆ ಎಂದರು.

## ಅನಂತಕುಮಾರ್ ಪಾತ್ರ ದೊಡ್ಡದು

ಈ ಸಮುದಾಯಗಳಿಗೆ ಪರಿಶಿಷ್ಟ ಪಂಗಡದ ಸ್ಥಾನಮಾನ ಸಿಗುವಲ್ಲಿ ಮಾಜಿ ಕೇಂದ್ರ ಸಚಿವ ಅನಂತಕುಮಾರ್ ಪಾತ್ರ ಬಹಳ ದೊಡ್ಡದು. ಅವರನ್ನು ನಾವೆಲ್ಲರೂ ಈ ಸನ್ನಿವೇಶದಲ್ಲಿ ಸ್ಮರಿಸಲೇಬೇಕು ಎಂದು ಬಿಜೆಪಿ ಮುಖಂಡ, ಮಾಜಿ ಶಾಸಕ ಸಿದ್ದರಾಜು ಹೇಳಿದರು. ಮೂರು ದಶಕಗಳಿಂದ ಈ ದಿನಕ್ಕಾಗಿ ಕಾದಿದ್ದೆವು. ತಾಂತ್ರಿಕ ಕಾರಣಗಳಿಂದಾಗಿ ಸಾಧ್ಯವಾಗಿರಲಿಲ್ಲ. ಈಗ ಆ ಕಾಲ ಬಂದಿದೆ. ಇದು ನಿಜಕ್ಕೂ ಸಂಭ್ರಮ ಪಡುವ ವಿಚಾರ ಎಂದು ಸಂತಸ ಹಂಚಿಕೊಂಡರು.

ಸಂವಿಧಾನ ತಿದ್ದುಪಡಿ ಮಸೂದೆ ಅಂಗೀಕಾರದ ಮೂಲಕ ಈ ಸಮುದಾಯಗಳ ಸಶಕ್ತೀಕರಣಕ್ಕೆ ಮೋದಿ ಸರ್ಕಾರ ಪ್ರಮುಖ ಹೆಜ್ಜೆ ಇಟ್ಟಿದೆ.

। ಪ್ರಲ್ಹಾದ್ ಜೋಶಿ ಕೇಂದ್ರ ಸಚಿವ